Akashvani: Bangalore
Regional News In Kannada
14.11.2025 : 14.30hrs

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

***************

**ಮುಖ್ಯಾಂಶಗಳು**

1. ಇಂದು ಮಕ್ಕಳ ದಿನಾಚರಣೆ; ಜವಾಹರಲಾಲ್ ನೆಹರು ಆಧುನಿಕ ಭಾರತದ ನಿರ್ಮಾತೃ - ಮುಖ್ಯಮಂತ್ರಿ ಸಿದ್ದರಾಮಯ್ಯ
2. ಕಬ್ಬು ಬೆಳೆಗಾರರ ಸಮಸ್ಯೆ ಬಗೆಹರಿಸಲು ರಾಜ್ಯ ಸರ್ಕಾರ ಬದ್ಧ - ಶಿವಾನಂದ ಪಾಟೀಲ
3. ವೃಕ್ಷಮಾತೆ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಸಾಲುಮರದ ತಿಮ್ಮಕ್ಕ ನಿಧನ; ಗಣ್ಯರ ಸಂತಾಪ
4. ಬಿಹಾರ ವಿಧಾನಸಭಾ ಚುನಾವಣೆ ಫಲಿತಾಂಶ; ಗೆಲುವಿನತ್ತ ಎನ್‌ಡಿಎ ಮೈತ್ರಿಕೂಟ
5. ವಿಶ್ವ ಮಧುಮೇಹ ದಿನ; ಹಲವೆಡೆ ಜಾಗೃತಿ ಕಾರ್ಯಕ್ರಮ

**********

ಇಂದು ಮಾಜಿ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರು ಅವರ ಜಯಂತಿಯ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ದೇಶದ ಮೊದಲ ಪ್ರಧಾನಮಂತ್ರಿ ಜವಾಹರ್ ಲಾಲ್ ನೆಹರು ಅವರು ಆಧುನಿಕ ಭಾರತದ ನಿರ್ಮಾತೃ ಎಂದು ಹೇಳಿದರು. ದೇಶದ ಮೊದಲ ಪ್ರಧಾನಮಂತ್ರಿ ಜವಾಹರ್ ಲಾಲ್ ನೆಹರೂ ಅವರ ಜನ್ಮದಿನದಂದೇ ಮಕ್ಕಳ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಮಕ್ಕಳನ್ನು ಕಂಡರೆ ಬಹಳ ಪ್ರೀತಿಯಿದ್ದ ಅವರು ಇಂದಿನ ಮಕ್ಕಳೇ ಭವಿಷ್ಯದ ಪ್ರಜೆಗಳು ಎಂದು ಅರ್ಥೈಸಿಕೊಂಡಿದ್ದರು. ಆದ್ದರಿಂದ ಚಾಚಾ ನೆಹರೂ ಎಂದೇ ಅವರನ್ನು ಕರೆಯಲಾಗುತ್ತಿತ್ತು ಎಂದರು. ಕೃಷಿ, ನೀರಾವರಿ, ಕೈಗಾರಿಕೆಗಳಲ್ಲಿ ಆಸಕ್ತಿ ಹೊಂದಿದ್ದ ನೆಹರೂ ಅವರು ದೇಶವನ್ನು ವೈಜ್ಞಾನಿಕವಾಗಿ, ವೈಚಾರಿಕವಾಗಿ ಬೆಳೆಸುವ ಪ್ರಯತ್ನ ಮಾಡಿದರು ಎಂದು ಮುಖ್ಯಮಂತ್ರಿ ಸ್ಮರಿಸಿದರು. ರಾಜ್ಯದ ವಿವಿಧೆಡೆ ಮಕ್ಕಳ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಮಕ್ಕಳೊಂದಿಗೆ ಸಂವಾದ ನಡೆಸಿ, ಮಕ್ಕಳಿಗೆ ಪರಿಸರದ ಬಗ್ಗೆ ಹಾಗೂ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸಬೇಕಿದೆ ಎಂದು ತಿಳಿಸಿದರು. ಕಾರ್ಯಕ್ರಮದ ಅಂಗವಾಗಿ ಸಸಿಗಳನ್ನು ನೆಡಲಾಯಿತು.

**********

ಇಂದಿನ ಯುವಪೀಳಿಗೆ ಸಹಕಾರ ಕ್ಷೇತ್ರದಲ್ಲಿ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದ್ದಾರೆ. ಬೆಂಗಳೂರಿನ ರಾಜ್ಯ ಸಹಕಾರ ಮಹಾಮಂಡಳದ ಆವರಣದಲ್ಲಿ ಸಹಕಾರಿ ಧುರೀಣ ಬಿ.ಎಸ್.ವಿಶ್ವನಾಥ್ ರವರ ಪುತ್ಥಳಿಯನ್ನು ಇಂದು ಅನಾವರಣಗೊಳಿಸಿ ಮಾತನಾಡಿದ ಮುಖ್ಯಮಂತ್ರಿ, ಬಿ.ಎಸ್.ವಿಶ್ವನಾಥ್ ಸಹಕಾರ ಕ್ಷೇತ್ರದಲ್ಲಿ ಅಪ್ರತಿಮ ಕೊಡುಗೆ ನೀಡಿದ್ದರು. ಅವರ ಆದರ್ಶಗಳನ್ನು ಎಲ್ಲರೂ ಪಾಲಿಸಬೇಕು ಎಂದರು. ಇದೇ ವೇಳೆ ಸಹಕಾರಿ ಧುರೀಣರಾದ ಜಿ.ಟಿ.ದೇವೇಗೌಡ, ಸೋಮಶೇಖರ್, ಷಡಕ್ಷರಿ, ಹೆಚ್.ಎಂ.ರೇವಣ್ಣ ಅವರ ಕಾರ್ಯವನ್ನು ಮುಖ್ಯಮಂತ್ರಿ ಶ್ಲಾಘಿಸಿದರು.

**********

ಬಾಗಲಕೋಟೆ ಜಿಲ್ಲೆ ಮುಧೋಳದಲ್ಲಿ ಕಬ್ಬು ತುಂಬಿದ ಟ್ರ್ಯಾಕ್ಟರ್ ಗಳು ಬೆಂಕಿಗೆ ಆಹುತಿಯಾಗಿರುವುದು ದುರಾದೃಷ್ಟಕರ ಘಟನೆಯಾಗಿದ್ದು, ಇದಕ್ಕೆ ಕಾರಣರಾದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿದ್ದಾರೆ. ಮುಧೋಳದಲ್ಲಿ ಕಬ್ಬು ಬೆಳೆಗಾರ ಸಮಸ್ಯೆಗಳನ್ನು ಆಲಿಸಿದ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಜಿಲ್ಲೆಯ ೧೪ ಕಾರ್ಖಾನೆಗಳಲ್ಲಿ ೧೦ ಕಾರ್ಖಾನೆ ಕಬ್ಬು ನುರಿಸುವ ಕಾರ್ಯ ಆರಂಭಿಸಿರುವುದಾಗಿ ತಿಳಿಸಿದರು. ರೈತರು ಸ್ವಯಂ ಪ್ರೇರಣೆಯಿಂದ ಕಬ್ಬು ಅರಿಯುವ ಪ್ರಕ್ರಿಯೆಗೆ ಅವಕಾಶ ಮಾಡಿಕೊಡಬೇಕು ಎಂದರು. ರೈತರ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಮುಖ್ಯಮಂತ್ರಿಗಳು ಹಾಗೂ ಸಂಬಂಧಪಟ್ಟವರೊಂದಿಗೆ ಮಾತುಕತೆ ನಡೆಸಿ, ಶೀಘ್ರದಲ್ಲಿಯೇ ಈ ಸಮಸ್ಯೆಗೆ ಸೂಕ್ತ ಪರಿಹಾರ ನೀಡಲು ಬದ್ಧರಾಗಿರುವುದಾಗಿ ಸಚಿವರು ತಿಳಿಸಿದರು.

ಧ್ವನಿ- ಶಿವಾನಂದ ಪಾಟೀಲ

**********

ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಜಿಕೆವಿಕೆ ಆವರಣದಲ್ಲಿ ನಿನ್ನೆಯಿಂದ ಆರಂಭವಾಗಿರುವ ಕೃಷಿ ಮೇಳಕ್ಕೆ ರೈತರು ಹಾಗೂ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಕೃಷಿ ವಿಶ್ವವಿದ್ಯಾಲಯ ಈ ಬಾರಿ ರೈತರಿಗಾಗಿ ಐದು ಹೊಸ ತಳಿಗಳನ್ನು ಅಭಿವೃದ್ಧಿಪಡಿಸಿದ್ದು, ಈ ಪ್ರಾತ್ಯಕ್ಷಿಕೆ ಕೇಂದ್ರಗಳಿಗೆ ರೈತರು, ವಿದ್ಯಾರ್ಥಿಗಳು ಭೇಟಿ ನೀಡಿ ವಿಜ್ಞಾನಿಗಳಿಂದ ಮಾಹಿತಿ ಪಡೆದುಕೊಂಡರು. ಒಂದೇ ಸೂರಿನಡಿ ಅಲಂಕಾರಿಕಾ ಮೀನುಗಳ ಪ್ರದರ್ಶನ ಮಾರಾಟ, ವಿವಿಧ ತಳಿಗಳ ಜಾನುವಾರುಗಳನ್ನು ನೋಡಲು ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಮುಗಿಬಿದ್ದರು. ಫಲಪುಷ್ಪ ಪ್ರದರ್ಶನದಲ್ಲಿ ಕರ್ನಾಟಕ ಬಾವುಟದ ಹೂವಿನ ಅಲಂಕಾರ ಗಮನ ಸೆಳೆಯಿತು.

**********

ಇಡೀ ದೇಶದ ಗಮನ ಸೆಳೆದಿರುವ ಬಿಹಾರ ವಿಧಾನಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಭಾರಿ ಬಿಗಿ ಭದ್ರತೆಯಲ್ಲಿ ನಡೆದಿದೆ. ಈವರೆಗೆ ಲಭ್ಯವಿರುವ ಮಾಹಿತಿಯಂತೆ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಭರ್ಜರಿ ಗೆಲುವಿನತ್ತ ಸಾಗಿದೆ. ಪ್ರತಿಸ್ಪರ್ಧಿ ಮಹಾಘಟ ಬಂಧನ ತೀವ್ರ ಹಿನ್ನಡೆ ಅನುಭವಿಸಿದೆ. ಪ್ರಶಾಂತ್ ಕಿಶೋರ್ ಅವರ ಜನ ಸೂರಜ್ ಪಕ್ಷ ಮೊದಲ ಪ್ರಯತ್ನದಲ್ಲೇ ವಿಫಲವಾಗಿದೆ. ಬಿಹಾರದ ೩೮ ಜಿಲ್ಲೆಗಳ ೪೬ ಮತ ಎಣಿಕೆ ಕೇಂದ್ರಗಳಲ್ಲಿ ೨೪೩ ವಿಧಾನಸಭಾ ಕ್ಷೇತ್ರಗಳ ಮತ ಎಣಿಕೆ ಕಾರ್ಯ ಪ್ರಗತಿಯಲ್ಲಿದೆ. ಇತ್ತೀಚಿನ ವರದಿಯಂತೆ ಎನ್‌ಡಿಎ ಮೈತ್ರಿಕೂಟ ೧೯೮ಕ್ಕೂ ಅಧಿಕ ಸ್ಥಾನಗಳಲ್ಲಿ ಮುನ್ನಡೆ ಕಾಯ್ದುಕೊಂಡಿದ್ದರೆ, ಮಹಾಘಟ ಬಂಧನ ೩೯ಕ್ಕೂ ಅಧಿಕ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಬಿಜೆಪಿ ೯೦, ಜೆಡಿಯು ೮೦, ಎಲ್‌ಜೆಪಿ ೨೦, ಆರ್‌ಜೆಡಿ ೩೦, ಕಾಂಗ್ರೆಸ್ ೫ ಹಾಗೂ ಪಕ್ಷೇತರರು ೧೮ ಸ್ಥಾನಗಳಲ್ಲಿ ಮುನ್ನಡೆಯನ್ನು ಕಾಯ್ದುಕೊಂಡಿದ್ದಾರೆ.

**********

ವೃಕ್ಷಮಾತೆ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಸಾಲುಮರದ ತಿಮ್ಮಕ್ಕ ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ನರಳುತ್ತಿದ್ದ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿತ್ತು. ಆದರೆ ಉಸಿರಾಟ ತೊಂದರೆಯಿಂದಾಗಿ ಇಂದು ಕೊನೆಯುಸಿರೆಳೆದಿದ್ದಾರೆ. ತುಮಕೂರು ಜಿಲ್ಲೆಯ ಗುಬ್ಬಿ ತಾಲೂಕಿನವರಾಗಿದ್ದ ತಿಮ್ಮಕ್ಕ, ಮಾಗಡಿ ತಾಲೂಕಿನ ಹುಲಿಕಲ್ ಗ್ರಾಮದ ಬಿಕ್ಕಲ ಚಿಕ್ಕಯ್ಯ ಅವರನ್ನು ವರಿಸಿದ ಬಳಿಕ ಹುಲಿಕಲ್‌ನ ರಾಜ್ಯ ಹೆದ್ದಾರಿ ೯೪ರಲ್ಲಿ ೩೮೫ ಆಲದ ಮರಗಳನ್ನು ಬೆಳೆಸಿದ್ದರು. ಪದ್ಮಶ್ರೀ, ಇಂದಿರಾ ಪ್ರಿಯದರ್ಶಿನಿ ವೃಕ್ಷಮಿತ್ರ ಸೇರಿದಂತೆ ಹಲವು ರಾಷ್ಟ್ರ ಹಾಗು ರಾಜ್ಯ ಪ್ರಶಸ್ತಿ, ಪುರಸ್ಕಾರಗಳಿಗೆ ಭಾಜನರಾಗಿದ್ದರು. ತಿಮ್ಮಕ್ಕ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ, ಅರಣ್ಯ ಸಚಿವ ಈಶ್ವರ್ ಖಂಡ್ರೆ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಾಲುಮರದ ತಿಮ್ಮಕ್ಕನವರ ನಿಧನದಿಂದ ನಾಡು ಬಡವಾಗಿದೆ ಎಂದು ಮುಖ್ಯಮಂತ್ರಿ ಸ್ಮರಿಸಿದ್ದಾರೆ. ಸಾಲುಮರದ ತಿಮ್ಮಕ್ಕ ಅವರು ರಾಮನಗರದಲ್ಲಿ ತಮ್ಮ ಮಕ್ಕಳಂತೆಯೇ ಪೋಷಿಸಿ ಬೆಳೆಸಿದ ಮರಗಳು ಇಂದಿಗೂ ಸ್ವಚ್ಛಂದವಾಗಿ ಪ್ರಕೃತಿ ಮಾತೆಯ ಮಡಿಲಲ್ಲಿ ರಾರಾಜಿಸುತ್ತಿವೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಸ್ಮರಿಸಿದ್ದಾರೆ. ಸಾಲುಮರದ ತಿಮ್ಮಕ್ಕ ಕರ್ನಾಟಕದ ಹೆಮ್ಮೆಯ ಪರಿಸರ ಪ್ರಚಾರಕರಾಗಿದ್ದರು. ಮಕ್ಕಳಿಲ್ಲದ ಈ ಮಹಾತಾಯಿ ಮರಗಳನ್ನೇ ಮಕ್ಕಳಂತೆ ಬೆಳೆಸುವ ಮೂಲಕ ಹಸಿರಿನ ಮಹತ್ವವನ್ನು ಜಗತ್ತಿಗೆ ಸಾರಿದ್ದರು ಎಂದು ಸಚಿವ. ಈಶ್ವರ್ ಖಂಡ್ರೆ ಸಂತಾಪ ಸಂದೇಶದಲ್ಲಿ ತಿಳಿಸಿದ್ದಾರೆ.

**********

ಬಳ್ಳಾರಿಯಲ್ಲಿ ನಿನ್ನೆಯಿಂದ ಅಗ್ನಿ ವೀರ್ ನೇಮಕಾತಿ ಆರಂಭಗೊಂಡಿದೆ. ಈ ತಿಂಗಳ ೧೮ರ ವರೆಗೆ ಈ ನೇಮಕಾತಿ ನಡೆಯಲಿದ್ದು, ಭಾರತೀಯ ಸೇನೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿದೆ. ಬಳ್ಳಾರಿ, ವಿಜಯನಗರ, ಚಿತ್ರದುರ್ಗ, ಬೆಂಗಳೂರು ನಗರ, ಬೆಂಗಳೂರು

ಗ್ರಾಮೀಣ, ಕೋಲಾರ, ಚಾಮರಾಜನಗರ ಚಿಕ್ಕಬಳ್ಳಾಪುರ, ರಾಮನಗರ, ಕೊಡುಗು, ಮಂಡ್ಯ, ಮೈಸೂರು, ಹಾಸನ ಜಿಲ್ಲೆಗಳಿಂದ ಯುವಕರು ಭಾಗವಹಿಸಿದ್ದಾರೆ. ಆಯ್ಕೆಯಾದವರ ದಾಖಲೆಗಳ ಪರಿಶೀಲನೆ ಮತ್ತು ವೈದ್ಯಕೀಯ ಪರೀಕ್ಷೆ ನಡೆಯಲಿದೆ. ಈ ಮೂರರಲ್ಲಿ ಉತ್ತೀರ್ಣರಾದವರನ್ನು ಮೆರಿಟ್ ಆಧಾರದ ಮೇಲೆ ಅಂತಿಮವಾಗಿ ಅಗತ್ಯತೆಗೆ ತಕ್ಕಂತೆ ತರಬೇತಿಗೆ ಆಯ್ಕೆ ಮಾಡಲಾಗುವುದು ಎಂದು ಬೆಂಗಳೂರಿನ ಸೇನಾ ನೇಮಕಾತಿ ವಿಭಾಗದ ಅಧಿಕಾರಿ ನಾಯಕ್ ಕಾರ್ತಿ ತಿಳಿಸಿದರು.

(ಧ್ವನಿ-ನಾಯಕ್ ಕಾರ್ತಿ)

ನೇಮಕಾತಿಗೆ ಬಂದ ಹಾಸನ ಜಿಲ್ಲೆಯ ಅಭ್ಯರ್ಥಿ ಸಾಗರ್ ಆಕಾಶವಾಣಿಯೊಂದಿಗೆ ತನ್ನ ಅನಿಸಿಕೆ ಹಂಚಿಕೊಂಡರು.

(ಧ್ವನಿ-ಸಾಗರ್)

**********

ಇಂದು ವಿಶ್ವ ಮಧುಮೇಹ ದಿನ. ಈ ಸಂದರ್ಭದಲ್ಲಿ, ವಿಶ್ವ ಆರೋಗ್ಯ ಸಂಸ್ಥೆಯ ಆಗ್ನೇಯ ಏಷ್ಯಾ ಪ್ರದೇಶವು ಹೆಚ್ಚುತ್ತಿರುವ ಮಧುಮೇಹದ ಹೊರೆಯನ್ನು ನಿಭಾಯಿಸಲು ತುರ್ತು ಮತ್ತು ಸಂಘಟಿತ ಕ್ರಮಕ್ಕಾಗಿ ಕರೆ ನೀಡಿದೆ. ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಯಲ್ಲಿ ಆರೋಗ್ಯ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ನಂದಿ ವೈದ್ಯಕೀಯ ವಿಜ್ಞಾನ ಹಾಗೂ ಸಂಶೋಧನಾ ಸಂಸ್ಥೆಯ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಸುನಿಲ್ ಸುಭಾಷ್ ಜೋಷಿ, ಇತ್ತೀಚಿನ ದಿನಗಳಲ್ಲಿ ಜೀವನ ಶೈಲಿ, ಒತ್ತಡದ ಜೀವನ ಮತ್ತಿತರ ಕಾರಣಗಳಿಂದಾಗಿ ಮಧುಮೇಹಿಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಪ್ರಸ್ತುತ ಭಾರತದಲ್ಲಿ ೧೦ ಕೋಟಿ ಮಧುಮೇಹಿಗಳಿದ್ದಾರೆ ಎಂದರು. ೨೦೫೦ ರ ವೇಳೆಗೆ ಈ ಸಂಖ್ಯೆ ೧೫ ಕೋಟಿಗೆ ಏರುವ ಸಾಧ್ಯತೆವಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

**********